**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಡಾ// ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106**

---

ಸಂ : ಸ.ಅ(ವಾ–106)/ಪಿ.ಆರ್/ /2021–22 ದಿನಾಂಕ: 19/**06/2021**

## ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 19–06–2021 ರಂದು ವಾರ್ಡ್ ಸಂಖ್ಯೆ: 106 **ಡಾ// ರಾಜ್‌ಕುಮಾರ್ ವಾರ್ಡ್** ನಲ್ಲಿ ಶ್ರೀಮತಿ ಗೀತಾ ಎಲ್, ಕಾರ್ಯಪಾಲಕ ಅಭಿಯಂತರು, ಬಿಬಿಎಂಪಿ ಹಾಗೂ ವಾರ್ಡ್ ನಂ. 106 ರ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈಧ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅ.ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
4) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು
5) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
6) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
7) ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
8) ಶ್ರೀ ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ಅವಿನಾಶ್, ಸೂಪರ್‌ವೈಸರ್, ಘನತ್ಯಾಜ್ಯ
10) ಶ್ರೀ ರಾಜೇಶ್, ಸೂಪರ್‌ವೈಸರ್, ಘನತ್ಯಾಜ್ಯ
11) ಶ್ರೀ ಮುರಳಿ, ತೆರಿಗೆ ವಸೂಲಾತಿಗಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- **ಆರೋಗ್ಯ ಇಲಾಖೆ:-** ಅಧ್ಯಕ್ಷರು ಆರೋಗ್ಯ ಇಲಾಖೆಯ ಅಧಿಕಾರಿಗಳ ಜೊತೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 2ನೇ ಅಲೆಯ ನಂತರ ಪತ್ತೆಯಾದ ಪ್ರಕರಣಗಳು, ಗುಣಮುಖರಾದವರ ವಿವರ, ಹೋಮ್ ಕ್ವಾರಂಟೈನಲ್ಲಿರುವವರು ಹಾಗೂ ಸೋಂಕಿತರ ಬಗ್ಗೆ ವಿವರಗಳನ್ನು ಪಡೆದುಕೊಂಡರು.

* **<u>ಸ್ವಚ್ಚತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ</u>**:- ಮಾನ್ಯ ಅಧ್ಯಕ್ಷರು ಘನತ್ಯಾಜ್ಯ ವಿಲೇವಾರಿ ಬಗ್ಗೆ ಮಾಹಿತಿ ಪಡೆದುಕೊಂಡರು.

* ಮಾನ್ಯ ಅಧ್ಯಕ್ಷರು ಒಂಟಿಮನೆ ಫಲಾನುಭವಿಗಳ ವಿವರ ಪಡೆದುಕೊಂಡರು.
* ಅಧ್ಯಕ್ಷರು ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ಬೆಸ್ಕಾಂ ವತಿಯಿಂದ ರಸ್ತೆ ಕಡಿತಗೊಳಿಸಿರುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು ಹಾಗೂ ಶೀಘ್ರವೇ ಕಾಮಗಾರಿ ಮುಗಿದ ನಂತರ ರಸ್ತೆಯನ್ನು ಸರಿಯಾದ ರೀತಿಯಲ್ಲಿ ಮುಚ್ಚುವಂತೆ ತಿಳಿಸಿದರು.
* ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುವ ಮತ್ತು ಇನ್ನಿತರೆ ಜನನಿಬೀಡ ಪ್ರದೇಶಗಳಲ್ಲಿ ಕೋರೋನಾ ಬಗ್ಗೆ ಜಾಗೃತವಹಿಸುವಂತೆ ಮಾನ್ಯ ಅಧ್ಯಕ್ಷರು ಅಧಿಕಾರಿಗಳಿಗೆ ತಿಲಿಸಿದರು.
* ಹಿರಿಯ ನಾಗರೀಕರು ಕಡ್ಡಾಯವಾಗಿ ಕೋವಿಡ್ ಲಸಿಕೆ ಹಾಕಿಸಿಕೊಳ್ಳುವಂತೆ ಹಾಗೂ ಜನರಲ್ಲಿ ಅರಿವು ಮೂಡುವ ಕಾರ್ಯವನ್ನು ಅಧಿಕಾರಿಗಳು ಮಾಡಬೇಕೆಂದು ಮಾನ್ಯ ಅಧ್ಯಕ್ಷರು ತಿಳಿಸಿದರು.
* ಸಕಾಲ, ಖಾತಾ ಬದಲಾವಣೆ ಬಗ್ಗೆ ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರುರವರೊಂದಿಗೆ ಚರ್ಚಿಸಿದರು.
* ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ಮಾಡಬೇಕೆಂದು ಮಾನ್ಯ ಅಧ್ಯಕ್ಷರು ಸೂಚಿಸಿದರು.
* ರಸ್ತೆಯಲ್ಲಿರುವ ಡೆಬ್ರಿಸ್ಗಳನ್ನು ಸಿಲ್ಟ್ ಅಂಡ್ ಟ್ರಾಕ್ಟರ್ ಮೂಲಕ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

19/04/21

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

19/04/21

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಯುಕ್ತರುರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ